e-mail: registrar@uni-mysore.ac.in
www.uni-mysore.ac.in

ತಂತಿ ವಿಳಾಸ: ಯೂನಿರೆಜ್
ದೂರವಾಣಿ ಸಂಖ್ಯೆ: 2419677/2419361
ಫ್ಯಾಕ್ಸ್: 0821-2419363/2419301

# ಮೈಸೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಸೌಧ
ಕ್ರಾಫರ್ಡ್‌ಭವನ, ಮೈಸೂರು

ದಿನಾಂಕ.05-04-2025

ಸಂಖ್ಯೆ:ಜಿಎಲ್13/137/2022-23

## ಸುತ್ತೋಲೆ

ವಿಷಯ: 'ವಿಶ್ವಜ್ಞಾನಿ' ಬಾಬಾಸಾಹೇಬ್ ಡಾ. ಬಿ.ಆರ್. ಅಂಬೇಡ್ಕರ್ ಅವರ 134ನೇ ಜನ್ಮ ದಿನಾಚರಣೆಯ ಕಾರ್ಯಕ್ರಮಕ್ಕೆ ಹಾಜರಾಗುವ ಬಗ್ಗೆ.

ಉಲ್ಲೇಖ:1. ನಿರ್ದೇಶಕರು, ಡಾ. ಬಿ.ಆರ್. ಅಂಬೇಡ್ಕರ್ ಸಂಶೋಧನಾ ಹಾಗೂ ವಿಸ್ತರಣಾ ಕೇಂದ್ರ, ಮಾ.ಗಂ, ಮೈಸೂರು ಇವರ ಪತ್ರದ ಸಂಖ್ಯೆ.ಮಾಗಂ/09/ಎಆರ್‌ಇಸಿ/2025-26, ದಿನಾಂಕ.02.04.2025.

2. ಮಾನ್ಯ ಕುಲಪತಿಯವರ ಅನುಮೋದನೆ ದಿನಾಂಕ.04.04.2025.

-:-

ದಿನಾಂಕ:14.04.2025ರಂದು ಬೆಳಗ್ಗೆ 10.30 ಗಂಟೆಗೆ ಮೈಸೂರು ವಿಶ್ವವಿದ್ಯಾನಿಲಯ ಡಾ. ಬಿ.ಆರ್.ಅಂಬೇಡ್ಕರ್‌ರವರ 134ನೇ ವರ್ಷದ ಜಯಂತಿ ಕಾರ್ಯಕ್ರಮ ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಪಿಹೆಚ್.ಡಿ ಸ್ನಾತಕ/ಸ್ನಾತಕೋತ್ತರ ಪದವಿಗಳಲ್ಲಿ ಪ್ರಥಮ ರ್‍ಯಾಂಕ್ ಪಡೆದ ವಿದ್ಯಾರ್ಥಿಗಳಿಗೆ ಅಭಿನಂದನಾ ಕಾರ್ಯಕ್ರಮವನ್ನು ವಿಶ್ವಜ್ಞಾನಿ ಸಭಾಂಗಣ, ಡಾ. ಬಿ.ಆರ್.ಅಂಬೇಡ್ಕರ್ ಕೇಂದ್ರ, ಮಾನಸಗಂಗೋತ್ರಿ, ಮೈಸೂರು ಇಲ್ಲಿ ಆಯೋಜಿಸಲಾಗಿದೆ. ಕಾರ್ಯಕ್ರಮವನ್ನು ಗೌರವಾನ್ವಿತ ನ್ಯಾಯಮೂರ್ತಿ ಎಲ್. ನಾರಾಯಣ ಸ್ವಾಮಿ, ನ್ಯಾಯಾಂಗ ಸದಸ್ಯರು, ಭಾರತೀಯ ಲೋಕಪಾಲ್, ನವದೆಹಲಿ ಇವರು ಉದ್ಘಾಟಿಸುವರು. ಪ್ರೊ. ರಹಮತ್ ತರೀಕೆರೆ, ಸಂದರ್ಶಕ ಪ್ರಾಧ್ಯಾಪಕರು, ಡಾ. ಬಿ.ಆರ್.ಅಂಬೇಡ್ಕರ್ ಪೀಠ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು ಇವರು **"ಡಾ. ಅಂಬೇಡ್ಕರ್ ಮತ್ತು ಸಮಕಾಲೀನ ಸಮಾಜ"** ಎಂಬ ವಿಷಯ ಕುರಿತು ವಿಶೇಷ ಉಪನ್ಯಾಸ ನೀಡುವರು. ಶ್ರೀಮತಿ. ಎಂ.ಕೆ. ಸವಿತಾ, ಕೆ.ಎ.ಎಸ್, ಕುಲಸಚಿವರು, ಮೈ.ವಿ.ವಿ.ನಿಲಯ, ಮೈಸೂರು ಮತ್ತು ಪ್ರೊ. ಎನ್. ನಾಗರಾಜ, ಕುಲಸಚಿವರು(ಪರೀಕ್ಷಾಂಗ), ಮೈ.ವಿ.ವಿ.ನಿಲಯ, ಮೈಸೂರು ಇವರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು ಮತ್ತು ಪ್ರೊ.ಎನ್.ಕೆ. ಲೋಕನಾಥ್, ಮಾನ್ಯ ಕುಲಪತಿಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು ಇವರು ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಲಿದ್ದಾರೆ.

ಈ ಹಿನ್ನಲೆಯಲ್ಲಿ ವಿಶ್ವವಿದ್ಯಾನಿಲಯದ ಎಲ್ಲಾ ಬಟವಾಡೆ ಅಧಿಕಾರಿಗಳು/ಸ್ನಾತಕ/ಸ್ನಾತಕೋತ್ತರ ಅಧ್ಯಯನ ವಿಭಾಗಗಳ ಅಧ್ಯಾಪಕರು/ಅಧ್ಯಾಪಕೇತರ ಉದ್ಯೋಗಿಗಳು/ಅತಿಥಿ ಉಪನ್ಯಾಸಕರು/ಸಂಶೋಧಕರು ಹಾಗೂ ವಿದ್ಯಾರ್ಥಿಗಳು ದಿನಾಂಕ.14.04.2025ರಂದು ಬೆಳಗ್ಗೆ 10.30 ಗಂಟೆಗೆ ವಿಶ್ವಜ್ಞಾನಿ ಸಭಾಂಗಣ, ಡಾ. ಬಿ.ಆರ್.ಅಂಬೇಡ್ಕರ್ ಕೇಂದ್ರ, ಮಾನಸಗಂಗೋತ್ರಿ, ಮೈಸೂರು ಇಲ್ಲಿ ಕಡ್ಡಾಯವಾಗಿ ಭಾಗವಹಿಸಬೇಕಾಗಿ ತಿಳಿಸಲಾಗಿದೆ.

Channa Keshava
ಉಪ ಕುಲಸಚಿವರು(ಸಾಮಾನ್ಯ) 5/4/2
ಆಡಳಿತ
ಮೈ.ವಿ.ವಿ. ಮೈಸೂರು

ಕುಲಸಚಿವರಿಂದ ಕರಡು ಅನುಮೋದಿಸಿದೆ

ಗೆ,

1. ನಿರ್ದೇಶಕರು, ಡಾ. ಬಿ.ಆರ್. ಅಂಬೇಡ್ಕರ್ ಸಂಶೋಧನಾ ಹಾಗೂ ವಿಸ್ತರಣಾ ಕೇಂದ್ರ, ಮಾನಸಗಂಗೋತ್ರಿ, ಮೈಸೂರು.
2. ಎಲ್ಲಾ ಸ್ನಾತಕ/ಸ್ನಾತಕೋತ್ತರ ಅಧ್ಯಯನ ವಿಭಾಗಗಳ ಅಧ್ಯಕ್ಷರು/ನಿರ್ದೇಶಕರು ಸಂಯೋಜನಾಧಿಕಾರಿಗಳು.
3. ವಿಶ್ವವಿದ್ಯಾನಿಲಯದ ಅಧೀನಕ್ಕೊಳಪಟ್ಟ ಎಲ್ಲಾ ಕಾಲೇಜುಗಳ ಪ್ರಾಂಶುಪಾಲರು.
4. ಎಲ್ಲಾ ಬಟವಾಡೆ ಅಧಿಕಾರಿಗಳು, ಮೈ.ವಿ.ವಿ. ನಿಲಯ, ಮೈಸೂರು.
5. ಆಡಳಿತಾಧಿಕಾರಿಗಳು, ಮಾನಸಗಂಗೋತ್ರಿ, ಮೈಸೂರು.

(2–5) ಈ ವಿಷಯವನ್ನು ತಮ್ಮ ವಿಭಾಗದ ಎಲ್ಲಾ ಅಧ್ಯಾಪಕರು/ಅಧ್ಯಾಪಕೇತರರು/ಅತಿಥಿ ಉಪನ್ಯಾಸಕರು/ಸಂಶೋಧಕರು ಹಾಗೂ ವಿದ್ಯಾರ್ಥಿಗಳ ಗಮನಕ್ಕೆ ತರಬೇಕಾಗಿ ತಿಳಿಸಿದೆ.

6. ಸಂಯೋಜಕರು, ಐ.ಸಿ.ಡಿ ಗಣಕ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು-**ಸದರಿ ಸುತ್ತೋಲೆಯನ್ನು ಮೈಸೂರು ವಿಶ್ವವಿದ್ಯಾನಿಲಯದ ಜಾಲತಾಣದಲ್ಲಿ ಪ್ರಕಟಿಸುವುದು.**
7. ಮಾನ್ಯ ಕುಲಪತಿಯವರ/ಕುಲಸಚಿವರು/ಕುಲಸಚಿವರು(ಪರೀಕ್ಷಾಂಗ)/ಹಣಕಾಸು ಅಧಿಕಾರಿಯವರ ಆಪ್ತಸಹಾಯಕರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
8. ಕಛೇರಿ ಪ್ರತಿ.